**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು ಇವರಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪಿ.ಹೆಚ್.ಡಿ. ಸಂಶೋಧನಾ ಅಭ್ಯರ್ಥಿಗಳಿಗೆ ನಡೆಸುವ ಕಾರ್ಯಗಾರಕ್ಕೆ ಅನುದಾನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಪತ್ರ ಸಂಖ್ಯೆ:ಕೆಎಸ್ಎ-12015/55/2019-ಕೆ.ಎಸ್.ಎ_ಎಂ.ವೈ.ಎಸ್.-ಕೆ.ಎಸ್.ಎ., ದಿನಾಂಕ: 01.01.2020.

----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ 2019-20ನೇ ಸಾಲಿನ ಪರಿಷ್ಕೃತ ಕ್ರಿಯಾ ಯೋಜನೆಯಡಿಯಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಗಾಗಿ ಲೆಕ್ಕಶೀರ್ಷಿಕೆ:2205-00-104-0-01-422ರಲ್ಲಿ ಪರಿಶಿಷ್ಟ ಜಾತಿಗೆ ರೂ.16.00ಲಕ್ಷ (ಹದಿನಾರು ಲಕ್ಷ ಮಾತ್ರ)ಗಳನ್ನು ಮತ್ತು ಲೆಕ್ಕಶೀರ್ಷಿಕೆ:2205-00-104-0-01-423ರಲ್ಲಿ ಪರಿಶಿಷ್ಟ ಪಂಗಡಕ್ಕೆ ರೂ.7.00ಲಕ್ಷ (ಏಳು ಲಕ್ಷ ಮಾತ್ರ)ಗಳನ್ನು ಕಾಯ್ದಿರಿಸಲಾಗಿದ್ದು, ಸದರಿ ಅನುದಾನವನ್ನು ಸರ್ಕಾರ ನಿರ್ದೇಶಿಸಿರುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಉಪಯೋಗಿಸಬೇಕಾಗಿರುತ್ತದೆ.

ಈ ನಿಟ್ಟಿನಲ್ಲಿ ಇತಿಹಾಸ ವಿಭಾಗದ ಮುಖ್ಯಸ್ಥರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳ ಗಂಗೋತ್ರಿ ವಿಶ್ವವಿದ್ಯಾಲಯ, ಇವರ ಮುಖಾಂತರ ಪ್ರಸ್ತಾವನೆ ಸಲ್ಲಿಸಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪಿ.ಹೆಚ್.ಡಿ. ಸಂಶೋಧನಾ ಅಭ್ಯರ್ಥಿಗಳಿಗೆ ಒಂದು ವಾರ ಕಾಲ "Research Methodology in History" ಎಂಬ ವಿಷಯವಾಗಿ ಕಾರ್ಯಾಗಾರ ಏರ್ಪಡಿಸಲು ಇಲಾಖೆಯಿಂದ ರೂ.5.90ಲಕ್ಷ (ಐದು ಲಕ್ಷದ ತೊಂಭತ್ತು ಸಾವಿರ ಮಾತ್ರ) ಅನುದಾನ ಕೋರಿದ್ದು, ಈ ಕಾರ್ಯಾಗಾರ ಏರ್ಪಡಿಸುವುದರಿಂದ ಸಮಾಜ ನಿಕಾಯದ ಪಿ.ಹೆಚ್.ಡಿ. ಸಂಶೋಧನಾ ವಿದ್ಯಾರ್ಥಿಗಳಿಗೆ ಅವರ ಸಂಶೋಧನೆಗೆ ಸಂಬಂಧಿಸಿದಂತೆ ಅನುಕೂಲವಾಗುವುದು.

2019-20ನೇ ಸಾಲಿನ ಪರಿಷ್ಕೃತ ಕ್ರಿಯಾಯೋಜನೆಯ ಆಯವ್ಯಯದಲ್ಲಿ ವಿಶೇಷ ಘಟಕ ಯೋಜನೆಯ ಲೆಕ್ಕಶೀರ್ಷಿಕೆ: 2205-00-104-0-01-422ರಡಿಯಲ್ಲಿ ರೂ.3.50ಲಕ್ಷ (ಮೂರು ಲಕ್ಷದ ಐವತ್ತು ಸಾವಿರ ಮಾತ್ರ) ಹಾಗೂ ಗಿರಿಜನ ಉಪ ಯೋಜನೆಯ ಲೆಕ್ಕಶೀರ್ಷಿಕೆ: 2205-00-104-0-01-423ರಡಿಯಲ್ಲಿ ರೂ.1.50ಲಕ್ಷವನ್ನು (ಒಂದು ಲಕ್ಷದ ಐವತ್ತು ಸಾವಿರ ಮಾತ್ರ) "Research Methodology in History" ಎಂಬ ವಿಷಯದಲ್ಲಿ ಏರ್ಪಡಿಸುವ ಕಾರ್ಯಾಗಾರಕ್ಕೆ ಹಣಕಾಸು ಅಧಿಕಾರಿಗಳು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು ಇವರಿಗೆ ಮಂಜೂರು ಮಾಡಲು ಸರ್ಕಾರದ ಆಡಳಿತಾತ್ಮಕ ಆದೇಶ ನೀಡಬೇಕೆಂದು ಸರ್ಕಾರವನ್ನು ಕೋರಿರುತ್ತಾರೆ.

ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಬೆಂಗಳೂರು ರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 03 ರಾಪಸ ಆಕ 2020,**

**ಬೆಂಗಳೂರು, ದಿನಾಂಕ:11.02.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯು 2019-20ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಒಂದು ವಾರಗಳ ಕಾಲ **"Research Methodology in History"** ಎಂಬ ಶೀರ್ಷಿಕೆಯಡಿಯಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲು ಒಟ್ಟು ರೂ.5.00ಲಕ್ಷ (ಐದು ಲಕ್ಷಗಳು ಮಾತ್ರ) ಗಳನ್ನು ನಿರ್ದೇಶಕರು,

....2

ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಮುಖಾಂತರ ಹಣಕಾಸು ಅಧಿಕಾರಿಗಳು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಸದರಿ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ: 2205-00-104-0-01-422ರ ಅಡಿಯಲ್ಲಿ ರೂ.3.50ಲಕ್ಷ (ಮೂರು ಲಕ್ಷದ ಐವತ್ತು ಸಾವಿರ ಮಾತ್ರ) ಮತ್ತು ಲೆಕ್ಕಶೀರ್ಷಿಕೆ: 2205-00-104-0-01-423ರಡಿ ರೂ.1.50ಲಕ್ಷ (ಒಂದು ಲಕ್ಷದ ಐವತ್ತು ಸಾವಿರ ಮಾತ್ರ) ಭರಿಸತಕ್ಕದ್ದು.

ಸದರಿ ಅನುದಾನವನ್ನು ಬಳಸಿಕೊಂಡ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಒದಗಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ: 13.01.2020 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ. ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ)

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು: 560001.
2. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
3. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.